# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | **683*** |
| ಸದಸ್ಯರ ಹೆಸರು | ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ |
| ಉತ್ತರಿಸುವ ದಿನಾಂಕ | 21-02-2024 |
| ಉತ್ತರಿಸುವವರು | ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | ದಿನಾಂಕ:13.12.2023ರಂದು ಪ್ರಶ್ನೆ ಸಂಖ್ಯೆ:966ಕ್ಕೆ ವಿಶ್ವಕರ್ಮ ಸಮಾಜಕ್ಕೆ ಸಂಬಂಧಿಸಿದಂತೆ ಬೆಳಗಾವಿಯಲ್ಲಿ ನಡೆದ ಅಧಿವೇಶನದಲ್ಲಿ ಸರ್ಕಾರವು ಭರವಸೆ ನೀಡಿರುವಂತೆ, ದೇವಾಲಯಗಳ ವ್ಯವಸ್ಥಾಪನಾ ಸಮಿತಿಯಲ್ಲಿ ಸಮಾಲೋಚಿಸಿ ತಿದ್ದುಪಡಿ ಮಸೂದೆ ಮಂಡಿಸಲಾಗುತ್ತಿದೆಯೇ:<br>ಮಂಡಿಸದಿದ್ದಲ್ಲಿ, ಇದು ವಿಶ್ವಕರ್ಮ ಸಮಾಜದ ಬಗ್ಗೆ ಇರುವ ನಿರ್ಲಕ್ಷ್ಯವನ್ನು ತೋರಿಸಿದಂತಾಗುವುದಿಲ್ಲವೇ; ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು? | ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ಅಧಿನಿಯಮ 2011ರ ಕಲಂ 25ರನ್ವಯ ದೇವಾಲಯಗಳಿಗೆ ವ್ಯವಸ್ಥಾಪನಾ ಸಮಿತಿಯನ್ನು ರಚಿಸುವಾಗ ಮೂಲ ಅಧಿನಿಯಮದ 25ನೇ ಪ್ರಕರಣದ ಉಪಬಂಧಕ್ಕೆ ಅಗತ್ಯ ತಿದ್ದುಪಡಿ ಮಾಡಲು ಕ್ರಮವಹಿಸಲಾಗಿದೆ. |
| ಆ) | ಈಗಾಗಲೇ ಸರ್ಕಾರವು ನೀಡಲಾಗಿದ್ದ ಭರವಸೆಯಂತೆ ದೇವಾಲಯಗಳ ವ್ಯವಸ್ಥಾಪನಾ ಸಮಿತಿಯಲ್ಲಿ ಒಬ್ಬರು ವಿಶ್ವಕರ್ಮ ಜನಾಂಗದವರಿಗೆ ಅವಕಾಶ ಮಾಡಿಕೊಡುವ ಬಗ್ಗೆ ಧರ್ಮಾದಾಯ ದತ್ತಿಗಳ (ತಿ) ಅಧಿನಿಯಮ 2011ರ ಸೆಕ್ಷನ್ 25ಕ್ಕೆ ಅಗತ್ಯ ತಿದ್ದುಪಡಿ ತರುವ ಮಸೂದೆಯನ್ನು ಪ್ರಸಕ್ತ ಅಧಿವೇಶನದಲ್ಲಿ ಮಂಡಿಸಲಾಗುತ್ತಿದೆಯೇ; | ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ಅಧಿನಿಯಮ 2011ರ ಕಲಂ 25ರನ್ವಯ ದೇವಾಲಯಗಳಿಗೆ ವ್ಯವಸ್ಥಾಪನಾ ಸಮಿತಿಯನ್ನು ರಚಿಸುವಾಗ ಮೂಲ ಅಧಿನಿಯಮದ 25ನೇ ಪ್ರಕರಣದ ಉಪಬಂಧಕ್ಕೆ ದಿನಾಂಕ:15.02.2024ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆಯಾಗಿದ್ದು, ವಿಧಾನ ಸಭೆಯಲ್ಲಿ ಮಂಡಿಸಲು ಕ್ರಮವಹಿಸಲಾಗುತ್ತಿದೆ. |
| ಇ) | ಇಲ್ಲದಿದ್ದಲ್ಲಿ, ಇಡೀ ವಿಶ್ವಕರ್ಮ ಸಮಾಜದ ಬಗ್ಗೆ ಸರ್ಕಾರ ನಿರ್ಲಕ್ಷ್ಯ ತೋರಿದಂತಾಗುವುದಿಲ್ಲವೇ? (ವಿವರ ನೀಡುವುದು) | ಈಗಾಗಲೇ ಕ್ರಮವಹಿಸಿರುವುದರಿಂದ ಪ್ರಶ್ನೆ ಉದ್ಭವಿಸುವುದಿಲ್ಲ. |

ಸಂಖ್ಯೆ: ಕಂಇ 30 ಮುಸಪ್ರ 2024

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು